# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಇದನ್ನು ಸ್ಥಾಪಿಸುವ ಕುರಿತು.

---

ಓದಲಾಗಿದೆ:

ಮಾನ್ಯ ಮುಖ್ಯ ಮಂತ್ರಿಯವರ 2008-09ನೇ ಸಾಲಿನ ಆಯವ್ಯಯ ಭಾಷಣ.

ಪ್ರಸ್ತಾವನೆ:

ಮಾನ್ಯ ಮುಖ್ಯ ಮಂತ್ರಿಯವರು, 2008-09ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಅನಿವಾಸಿ ಕನ್ನಡಿಗರ ವಿಶೇಷ ಘಟಕ (ಎನ್.ಆರ್.ಐ. ಸೆಲ್) ಸ್ಥಾಪನೆ ಮಾಡುವುದಾಗಿ ತಿಳಿಸಿರುತ್ತಾರೆ. ಈ ಘಟಕವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರೀತಿಯಲ್ಲಿ ಘೋಷಿಸಲಾಗಿದೆ (2008-09ರ ಆಯವ್ಯಯ ಭಾಷಣದ ಪುಸ್ತಕದ ಪುಟ ಸಂಖ್ಯೆ 20). ಇದರ ವ್ಯಾಪ್ತಿಯನ್ನು ವಿಸ್ತಾರಗೊಳಿಸುವ ದೃಷ್ಟಿಯಿಂದ ಹಾಗೂ ಆಡಳಿತ ನಿರ್ವಹಣೆಯ ದೃಷ್ಟಿಯಿಂದ "ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ" ಎಂದು ಸ್ಥಾಪಿಸಲು ನಿರ್ಧರಿಸಿದೆ. ಹಾಗೂ, ಈ ಸಮಿತಿಯನ್ನು ಮಾನ್ಯ ಮುಖ್ಯ ಮಂತ್ರಿಯವರ ನೇರ ನಿಯಂತ್ರಣಕ್ಕೆ ಒಳಪಡಿಸಬೇಕಾಗಿರುವುದರಿಂದ, ಇದನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸಲು ತೀರ್ಮಾನಿಸಲಾಗಿದೆ.

ಪ್ರಸ್ತುತ, ಕೇಂದ್ರ ಸರ್ಕಾರ ಮತ್ತು ಇತರ ರಾಜ್ಯಗಳಲ್ಲಿ ಅನಿವಾಸಿ ಭಾರತೀಯರಿಗಾಗಿ ಇರುವ ವಿಭಾಗದ ಮಾದರಿಯಲ್ಲಿ ಕರ್ನಾಟಕ ಸರ್ಕಾರವು "ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ" ಇದನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಈ ಸಮಿತಿಯ ಮೂಲಕ ಈ ಕೆಳಕಂಡ ಕ್ಷೇತ್ರಗಳಲ್ಲಿ ಅನಿವಾಸಿ ಭಾರತೀಯರಿಗೆ ಒಂದು ವೇದಿಕೆಯನ್ನು ಒದಗಿಸಲು ಉದ್ದೇಶಿಸಿದೆ:-

(1) ಹೊರದೇಶಗಳಲ್ಲಿ ನೆಲೆಸಿರುವ ಕರ್ನಾಟಕದ ಜನರ ಹಿತಾಸಕ್ತಿಗಳಿಗೆ ಪೂರಕವಾದ ಎಲ್ಲಾ ಚಟುವಟಿಕೆಗಳಿಗೆ ಪ್ರೋತ್ಸಾಹಿಸುವುದು;

(2) ಹೊರದೇಶಗಳಲ್ಲಿನ ಕರ್ನಾಟಕದ ಜನರು ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಬೆಳೆಸಿಕೊಂಡು ಅಭಿವೃದ್ಧಿಗೊಳಿಸಿಕೊಳ್ಳುವ ನಿಟ್ಟಿನಲ್ಲಿ ಅವಕಾಶ ಕಲ್ಪಿಸಲು ಸಹಕರಿಸುವುದು;

(3) ಅನಿವಾಸಿ ಭಾರತೀಯರ ಸಹಕಾರದೊಂದಿಗೆ ರಾಜ್ಯದಲ್ಲಿನ ಐ.ಟಿ. / ಬಿ.ಟಿ. / ವಿಜ್ಞಾನ / ತಂತ್ರಜ್ಞಾನ ಮತ್ತು ಸಂಶೋಧನಾ ಕ್ಷೇತ್ರಗಳಲ್ಲಿ ಹೆಚ್ಚಿನ ಅಭಿವೃದ್ಧಿ ಸಾಧಿಸಲು ಅಗತ್ಯವಿರುವ ಕಾರ್ಯಕ್ರಮಗಳನ್ನು ರೂಪಿಸುವುದು ಮತ್ತು ಅನುಷ್ಠಾನಗೊಳಿಸುವುದು;

ಪುಟ – 2ಕ್ಕೆ ಮುಂದುವರೆದಿದೆ.

(4) ಅನಿವಾಸಿ ಭಾರತೀಯರನ್ನು ರಾಜ್ಯದಲ್ಲಿನ ಶೈಕ್ಷಣಿಕ ಹಾಗೂ ಇನ್ನಿತರ ಕ್ಷೇತ್ರಗಳ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸುವುದು;

(5) ಅನಿವಾಸಿ ಭಾರತೀಯರಿಂದ ರಾಜ್ಯದಲ್ಲಿನ ಕೈಗಾರಿಕೆಗಳಲ್ಲಿ ಮತ್ತು ಮೂಲಭೂತ ಸೌಕರ್ಯಗಳಲ್ಲಿ ಬಂಡವಾಳ ಹೂಡಿಕೆಯನ್ನು ಪ್ರೋತ್ಸಾಹಿಸುವುದು;

(6) ಅನಿವಾಸಿ ಭಾರತೀಯರನ್ನು ರಾಜ್ಯದ ಸಾಮಾಜಿಕ ಹಾಗೂ ಆರ್ಥಿಕ ಕ್ಷೇತ್ರಗಳ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸುವುದು;

(7) ಅನಿವಾಸಿ ಭಾರತೀಯರ ಕ್ಷೇಮಾಭಿವೃದ್ಧಿಗೆ ಸಂಬಂಧಿಸಿದ ಚಟುವಟಿಕೆಗಳನ್ನು ಪ್ರೋತ್ಸಾಹಿಸುವುದು.

ಇದರ ಜೊತೆಗೆ ಅನಿವಾಸಿ ಭಾರತೀಯರಿಗೆ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚು ಪರಿಣಾಮಕಾರಿಯಾಗಿ ಭಾಗವಹಿಸಲು ಅನುವಾಗುವಂತೆ ಅವಕಾಶಗಳನ್ನು ಕಲ್ಪಿಸುವುದು ಅವಶ್ಯಕವಾಗಿದೆ.

ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಇದು ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕಾಗಿರುವುದರಿಂದ, ಅದಕ್ಕೆ ಸ್ವಾಯತ್ತ ಸಂಸ್ಥೆಯ ಸ್ಥಾನಮಾನ ನೀಡಲಾಗುವುದು. ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಮುಖ್ಯಸ್ಥರನ್ನೊಳಗೊಂಡಂತೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ವ್ಯಕ್ತಿಗಳನ್ನೊಳಗೊಂಡಂತೆ ಕಾರ್ಯಕಾರಿ ಸಮಿತಿಯನ್ನು ರಚಿಸಲು ಉದ್ದೇಶಿಸಲಾಗಿದೆ.

ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ, ಇದು ಪ್ರಸಕ್ತ ಸಾಲಿನಿಂದಲೇ ಕಾರ್ಯನಿರ್ವಹಿಸಬೇಕಾಗಿರುವ ಅಗತ್ಯತೆಯನ್ನು ಪರಿಗಣಿಸಿ, ಮೇಲ್ಕಂಡ ಸಮಿತಿ ಸ್ಥಾಪನೆಗೆ ಸಂಬಂಧಿಸಿದಂತೆ ಕೆಳಕಂಡ ಆದೇಶ ಹೊರಡಿಸಿ

<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 68 ಶಿಸನೇ 2008, ಬೆಂಗಳೂರು, ದಿನಾಂಕ 05.08.2008.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು "ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ" ವನ್ನು ಪ್ರಸಕ್ತ ಸಾಲಿನಿಂದ ಸ್ಥಾಪಿಸಲು ಮಂಜೂರಾತಿ ನೀಡಿದೆ.

2. **ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ,** ಇದು ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ, ಅದಕ್ಕೆ ಸ್ವಾಯತ್ತ ಸಂಸ್ಥೆಯ ಸ್ಥಾನಮಾನ ನೀಡಲಾಗಿದೆ. ಈ ಸಮಿತಿಯ ಕೇಂದ್ರಸ್ಥಾನವು ಬೆಂಗಳೂರು ನಗರದಲ್ಲಿರತಕ್ಕದ್ದು.

ಪುಟ – 3ಕ್ಕೆ
ಮುಂದುವರೆದಿದೆ.

(19)



3. ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ "ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ" ಇದು ಈ ಕೆಳಕಂಡ ಸದಸ್ಯರುಗಳನ್ನು ಒಳಗೊಂಡಿರತಕ್ಕದ್ದು:-

| | | | |
|---|---|---|---|
| 1 | ಮಾನ್ಯ ಮುಖ್ಯ ಮಂತ್ರಿಯವರು, ಕರ್ನಾಟಕ ಸರ್ಕಾರ | ... | ಅಧ್ಯಕ್ಷರು |
| 2 | ಮಾನ್ಯ ಮುಖ್ಯ ಮಂತ್ರಿಯವರಿಂದ ನೇಮಿಸಲ್ಪಡುವ ಕರ್ನಾಟಕ ವಿಧಾನ ಮಂಡಲದ ಓರ್ವ ಸದಸ್ಯರು | ... | ಉಪಾಧ್ಯಕ್ಷರು |
| 3 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ | ... | ಸದಸ್ಯರು |
| 4 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ | ... | ಸದಸ್ಯರು |
| 5 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಐ.ಟಿ., ಬಿ.ಟಿ., ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ | ... | ಸದಸ್ಯರು |
| 6 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮೂಲಭೂತ ಸೌಲಭ್ಯ ಇಲಾಖೆ | ... | ಸದಸ್ಯರು |
| 7 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ | ... | ಸದಸ್ಯರು |
| 8 | ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ | ... | ಸದಸ್ಯರು |
| 9 | ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ | ... | ಸದಸ್ಯರು |
| 10 | ಸರ್ಕಾರದಿಂದ ನಾಮನಿರ್ದೇಶಿತನಾದ ಅನಿವಾಸಿ ಭಾರತೀಯರ ಒಬ್ಬ ಪ್ರತಿನಿಧಿ | ... | ಸದಸ್ಯರು |
| 11 | ಸಾಹಿತ್ಯ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿನ ಪರಿಣಿತರಾದ ಸರ್ಕಾರದಿಂದ ನಾಮನಿರ್ದೇಶಿತನಾದ ಒಬ್ಬ ವ್ಯಕ್ತಿ | ... | ಸದಸ್ಯರು |
| 12 | ಐ.ಟಿ. / ಬಿ.ಟಿ. / ವಿಜ್ಞಾನ / ತಂತ್ರಜ್ಞಾನ ಕ್ಷೇತ್ರಗಳಲ್ಲಿನ ಪರಿಣಿತರಾದ ಸರ್ಕಾರದಿಂದ ನಾಮನಿರ್ದೇಶಿತನಾದ ಒಬ್ಬ ವ್ಯಕ್ತಿ | ... | ಸದಸ್ಯರು |
| 13 | ಆರ್ಥಿಕ ತಜ್ಞರಾದ ಸರ್ಕಾರದಿಂದ ನಾಮನಿರ್ದೇಶಿತನಾದ ಒಬ್ಬ ವ್ಯಕ್ತಿ | ... | ಸದಸ್ಯರು |
| 14 | ಸಾಮಾಜಿಕ ತಜ್ಞರಾದ ಸರ್ಕಾರದಿಂದ ನಾಮನಿರ್ದೇಶಿತನಾದ ಒಬ್ಬ ವ್ಯಕ್ತಿ | ... | ಸದಸ್ಯರು |
| 15 | ಆಡಳಿತ ತಜ್ಞರಾದ ಸರ್ಕಾರದಿಂದ ನಾಮನಿರ್ದೇಶಿತನಾದ ಒಬ್ಬ ವ್ಯಕ್ತಿ | ... | ಸದಸ್ಯರು |
| 16 | ಅನಿವಾಸಿ ಭಾರತೀಯ ಸಮಿತಿಯ ಕಾರ್ಯದರ್ಶಿ (ಗ್ರೂಪ್ 'ಎ' ಸೀನಿಯರ್ ಸ್ಕೇಲ್ ದರ್ಜೆಗೆ ಕಡಿಮೆ ಇಲ್ಲದ ಸರ್ಕಾರದಿಂದ ನೇಮಿಸಲ್ಪಟ್ಟ ಒಬ್ಬ ಅಧಿಕಾರಿ) | ... | ಸದಸ್ಯ ಕಾರ್ಯದರ್ಶಿ. |

ಪುಟ - 4ಕ್ಕೆ
ಮುಂದುವರೆದಿದೆ.

4. "ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ" ಇದರ ಕಾರ್ಯದರ್ಶಿ (ಸದಸ್ಯ ಕಾರ್ಯ ಯವರು ಸಮಿತಿಯ ನಿರ್ಣಯ / ಯೋಜನೆಗಳನ್ನು ಕಾರ್ಯರೂಪಕ್ಕೆ ತರುವ ಜವಾಬ್ದಾರಿ ಹೊಂದಿರುತ್ತಾರೆ.

5. ಈ ಸಮಿತಿಗೆ ಅವಶ್ಯವಿರುವ ಇತರೇ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದ ಹುದ್ದೆಗಳ ಸೃಜನೆಗೆ ಪ್ರತ್ಯೇಕ ಆದೇಶ ಹೊರಡಿಸಲಾಗುವುದು.

6. ಈ ಸಮಿತಿಯನ್ನು ಕೆಳಕಂಡ ಧ್ಯೇಯೋದ್ದೇಶಗಳಿಗೆ ಸೃಜಿಸಲಾಗಿದೆ:-

(1) ಹೊರದೇಶಗಳಲ್ಲಿ ನೆಲೆಸಿರುವ ಕರ್ನಾಟಕದ ಜನರ ಹಿತಾಸಕ್ತಿಗಳಿಗೆ ಪೂರಕವಾದ ಎಲ್ಲಾ ಚಟುವಟಿಕೆಗಳಿಗೆ ಪ್ರೋತ್ಸಾಹಿಸುವುದು;

(2) ಹೊರದೇಶಗಳಲ್ಲಿನ ಕರ್ನಾಟಕದ ಜನರು ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಬೆಳೆಸಿಕೊಂಡು ಅಭಿವೃದ್ಧಿಗೊಳಿಸಿಕೊಳ್ಳುವ ನಿಟ್ಟಿನಲ್ಲಿ ಅವಕಾಶ ಕಲ್ಪಿಸಲು ಸಹಕರಿಸುವುದು;

(3) ಅನಿವಾಸಿ ಭಾರತೀಯರ ಸಹಕಾರದೊಂದಿಗೆ ರಾಜ್ಯದಲ್ಲಿನ ಐ.ಟಿ. / ಬಿ.ಟಿ. / ವಿಜ್ಞಾನ / ತಂತ್ರಜ್ಞಾನ ಮತ್ತು ಸಂಶೋಧನಾ ಕ್ಷೇತ್ರಗಳಲ್ಲಿ ಹೆಚ್ಚಿನ ಅಭಿವೃದ್ಧಿ ಸಾಧಿಸಲು ಅಗತ್ಯವಿರುವ ಕಾರ್ಯಕ್ರಮಗಳನ್ನು ರೂಪಿಸುವುದು ಮತ್ತು ಅನುಷ್ಠಾನಗೊಳಿಸುವುದು;

(4) ಅನಿವಾಸಿ ಭಾರತೀಯರನ್ನು ರಾಜ್ಯದಲ್ಲಿನ ಶೈಕ್ಷಣಿಕ ಹಾಗೂ ಇನ್ನಿತರ ಕ್ಷೇತ್ರಗಳ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸುವುದು;

(5) ಅನಿವಾಸಿ ಭಾರತೀಯರಿಂದ ರಾಜ್ಯದಲ್ಲಿನ ಕೈಗಾರಿಕೆಗಳಲ್ಲಿ ಮತ್ತು ಮೂಲಭೂತ ಸೌಕರ್ಯಗಳಲ್ಲಿ ಬಂಡವಾಳ ಹೂಡಿಕೆಯನ್ನು ಪ್ರೋತ್ಸಾಹಿಸುವುದು;

(6) ಅನಿವಾಸಿ ಭಾರತೀಯರನ್ನು ರಾಜ್ಯದ ಸಾಮಾಜಿಕ ಹಾಗೂ ಆರ್ಥಿಕ ಕ್ಷೇತ್ರಗಳ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸುವುದು;

(7) ಅನಿವಾಸಿ ಭಾರತೀಯರ ಕ್ಷೇಮಾಭಿವೃದ್ಧಿಗೆ ಸಂಬಂಧಿಸಿದ ಚಟುವಟಿಕೆಗಳನ್ನು ಪ್ರೋತ್ಸಾಹಿಸುವುದು.

ಪುಟ - 5ಕ್ಕೆ
ಮುಂದುವರೆದಿದೆ.

(18)

7. ಈ ಸಮಿತಿಯು ರಾಜ್ಯ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವುದು. ಇದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರ (ವ್ಯವಹಾರ ಹಂಚಿಕೆ) ನಿಯಮಗಳು, 1977ಕ್ಕೆ ಸೂಕ್ತ ತಿದ್ದುಪಡಿ ತರಲಾಗುವುದು.

8. ಈ ಸಮಿತಿಯು ಸ್ವಾಯತ್ತ ಸಂಸ್ಥೆಯಾಗಿ ಕಾರ್ಯನಿರ್ವಹಿಸಬೇಕಾಗಿರುವುದರಿಂದ, ಸರ್ಕಾರದಿಂದ ವಾರ್ಷಿಕ ಅನುದಾನವನ್ನು ನೀಡಲಾಗುವುದು. ಅನುದಾನದ ವಿವರ ಕುರಿತಂತೆ ಪ್ರತ್ಯೇಕ ಆದೇಶ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎಸ್. ತಿಪ್ಪೇಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
~~(ಶಿ)~~ (ರಾಜ್ಯ ಶಿಷ್ಟಾಚಾರ).

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

ಪ್ರತಿ:

1. ಮಹಾಲೇಖಪಾಲರು (ಎ. ಅಂಡ್ ಇ.) / (ಆಡಿಟ್–1) / (ಆಡಿಟ್–2), ಕರ್ನಾಟಕ, ಬೆಂಗಳೂರು–560001
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು–1
3. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು–1
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಬೆಂಗಳೂರು–1
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
6. ಎಲ್ಲಾ ಜಿಲ್ಲಾಧಿಕಾರಿಗಳು / ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
7. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು–1
8. ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ / ವಿಕಾಸ ಸೌಧ, ಬೆಂಗಳೂರು–1
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.